प्रेस प्रकाशनी PRESS RELEASE

भारतीय रिज़र्व बैंक
RESERVE BANK OF INDIA

वेबसाइट : www.rbi.org.in/hindi
Website : www.rbi.org.in
ई-मेल/email : helpdoc@rbi.org.in

**संचार विभाग,** केंद्रीय कार्यालय, शहीद भगत सिंह मार्ग, फोर्ट, मुंबई - 400 001
**Department of Communication**, Central Office, Shahid Bhagat Singh Marg, Fort, Mumbai - 400 001 फोन/Phone: 022 - 2266 0502

27 ಮಾರ್ಚ್ 2025

**ಶ್ರೀ ಗಣೇಶ್ ಸಹಕಾರ ಬ್ಯಾಂಕ್ ನಿಯಮಿತ, ಗುಲ್ಬರ್ಗ, ಕರ್ನಾಟಕ - ಈ ಬ್ಯಾಂಕಿಗೆ ಆರ್ ಬಿ ಐ ವಿತ್ತೀಯ ದಂಡ ವಿಧಿಸಿದೆ.**

ಭಾರತೀಯ ರಿಸರ್ವ್ ಬ್ಯಾಂಕ್ (ಆರ್ ಬಿ ಐ) ತನ್ನ ಮಾರ್ಚ್ 25, 2025 ರ ಆದೇಶದ ಮೂಲಕ ಶ್ರೀ ಗಣೇಶ್ ಸಹಕಾರ ಬ್ಯಾಂಕ್ ನಿಯಮಿತ, ಗುಲ್ಬರ್ಗ, ಕರ್ನಾಟಕ - ಈ ಬ್ಯಾಂಕಿಗೆ (ಬ್ಯಾಂಕು) ರೂ. 2.50 ಲಕ್ಷ ( ರೂ. ಎರಡು ಲಕ್ಷ ಐವತ್ತು ಸಾವಿರ ಮಾತ್ರ ) ವಿತ್ತೀಯ ದಂಡ ವಿಧಿಸಿದೆ. 'ಅನಾವರಣ ಮಾನದಂಡಗಳು ಮತ್ತು ಶಾಸನಬದ್ದ /ಇತರ ನಿರ್ಬಂಧಗಳು - ಪೌರ ಸಹಕಾರಿ ಬ್ಯಾಂಕುಗಳು' ಮತ್ತು 'ಪೌರ ಸಹಕಾರಿ ಬ್ಯಾಂಕುಗಳ ಲಾಭದಿಂದ ದೇಣಿಗೆಗಳು, ಕೊಡುಗೆಗಳು/ಸಾರ್ವಜನಿಕ ಧರ್ಮಾರ್ಥ ಉದ್ದೇಶಗಳು' – ಕುರಿತಾಗಿ ನೀಡಿದ್ದ ಕೆಲವು ನಿರ್ದೇಶನಗಳ ಅನುಪಾಲನೆ ಮಾಡದೇ ಇದ್ದುದಕ್ಕಾಗಿ ಬ್ಯಾಂಕಿಂಗ್ ನಿಯಂತ್ರಣ ಅಧಿನಿಯಮ 1949 ರ ಕಲಂ 47 ಎ(1)(ಸಿ ) ಜೊತೆ ಓದಲಾದ ಕಲಂ 46(4) (i) ಮತ್ತು 56 ರ ಅಡಿಯಲ್ಲಿ ತನಗೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಭಾರತೀಯ ರಿಸರ್ವ್ ಬ್ಯಾಂಕ್ ಈ ದಂಡವನ್ನು ವಿಧಿಸಿದೆ.

ಮಾರ್ಚ್ 31, 2023 ರಂದು ಇದ್ದ ಬ್ಯಾಂಕಿನ ಆರ್ಥಿಕ ಪರಿಸ್ಥಿತಿ ಯನ್ನು ಆಧರಿಸಿ ಬ್ಯಾಂಕಿನ ಶಾಸನಬದ್ದ ನಿರೀಕ್ಷಣೆಯನ್ನು ಭಾರತೀಯ ರಿಸರ್ವ್ ಬ್ಯಾಂಕ್ ಮಾಡಿತ್ತು. ಶಾಸನಬದ್ದ ನಿರ್ದೇಶನಗಳ ಅನುಪಾಲನೆ ಆಗದೆ ಇರುವ ಬಗ್ಗೆ ನಿರೀಕ್ಷಣಾ ನಿಷ್ಕರ್ಷೆಯನ್ನು ಮತ್ತು ಈ ಸಂಬಂಧ ನಡೆದ ಪತ್ರ ವ್ಯವಹಾರಗಳನ್ನು ಆಧರಿಸಿ ಭಾರತೀಯ ರಿಸರ್ವ್ ಬ್ಯಾಂಕಿನ ನಿರ್ದೇಶನಗಳ ಅನುಪಾಲನೆ ಮಾಡುವಲ್ಲಿ ವಿಫಲವಾದುದಕ್ಕಾಗಿ ಏಕೆ ದಂಡ ವಿಧಿಸಬಾರದು ಎಂದು ಕಾರಣ ಕೇಳಿ ನೋಟೀಸನ್ನು ನೀಡಲಾಗಿತ್ತು. ಬ್ಯಾಂಕು ಈ ಕುರಿತು ಸಲ್ಲಿಸಿದ ಉತ್ತರ ಮತ್ತು ವೈಯಕ್ತಿಕ ವಿಚಾರಣೆಯಲ್ಲಿ ಮಾಡಲಾದ ಮೌಖಿಕ ನಿವೇದನೆಗಳನ್ನು ಪರಿಗಣಿಸಿದ ನಂತರ ಭಾರತೀಯ ರಿಸರ್ವ್ ಬ್ಯಾಂಕಿಗೆ, ಇತರ ವಿಷಯಗಳ ನಡುವೆ, ಬ್ಯಾಂಕಿನ ವಿರುದ್ದ ಮಾಡಲಾದ ಕೆಳಕಂಡ ಆರೋಪಗಳು ಸ್ಥಿರಪಟ್ಟಿವೆ ಮತ್ತು ವಿತ್ತೀಯ ದಂಡ ವಿಧಿಸುವುದಕ್ಕೆ ಅರ್ಹವಾಗಿವೆ ಎಂದು ಗೊತ್ತಾಯಿತು:

ಬ್ಯಾಂಕು -

i) ವಿವೇಕಯುತ ಅಂತರಬ್ಯಾಂಕು (ಗ್ರೋಸ್-gross) ಮತ್ತು ಅಂತರಬ್ಯಾಂಕು ಪ್ರತಿಪಕ್ಷ ಅನಾವರಣ ಮಿತಿಯನ್ನು ಮೀರಿತ್ತು; ಮತ್ತು

ii) ನಿಗದಿತ ನಿಯಂತ್ರಕ ಮಿತಿಯನ್ನು ಮೀರಿ ದೇಣಿಗೆಯನ್ನು ನೀಡಿತ್ತು.

ನಿಯಂತ್ರಣ ಅನುಪಾಲನೆಯಲ್ಲಿ ಕಂಡುಬಂದ ಕೊರತೆಗಾಗಿ ಮೇಲಿನ ಕ್ರಮವನ್ನು ತೆಗೆದುಕೊಳ್ಳಲಾಗಿದೆಯೇ ವಿನಃ ಇದು ಬ್ಯಾಂಕು ತನ್ನ ಗ್ರಾಹಕರೊಂದಿಗೆ ಮಾಡಿಕೊಂಡ ಯಾವುದೇ

ವ್ಯವಹಾರ ಅಥವಾ ಒಪ್ಪಂದದ ಸಿಂಧುತ್ವದ ಬಗೆಗಿನ ಘೋಷಣೆಯಲ್ಲ.  ಅಲ್ಲದೆ, ಈ ವಿತ್ತೀಯ ದಂಡ ವಿಧಿಸುವ ಕ್ರಿಯೆಯು ಭಾರತೀಯ ರಿಸರ್ವ್ ಬ್ಯಾಂಕು ಈ ಬ್ಯಾಂಕಿನ ಮೇಲೆ ತೆಗೆದುಕೊಳ್ಳಬಹುದಾದ ಯಾವುದೇ ಇತರ ಕ್ರಮದ ಪೂರ್ವಾಗ್ರಹದಿಂದ ಹೊರತಾಗಿದೆ.

**(ಪುನೀತ್ ಪಾಂಚೋಲಿ)**
ಚೀಫ್ ಜನರಲ್ ಮ್ಯಾನೇಜರ್

**ಪತ್ರಿಕಾ ಪ್ರಕಟಣೆ: 2024-2025/2489**